ಕರ್ನಾಟಕ ಸರ್ಕಾರ
ಅಧ್ಯಕ್ಷರು ಶಾಲಾ ಶಿಕ್ಷಣ ಮತ್ತು ಮೌಲ್ಯ ನಿರ್ಣಯ ಮಂಡಲಿ 6 ನೇ ಅಡ್ಡರಸ್ತೆ,
ಮಲ್ಲೇಶ್ವರಂ ಬೆಂಗಳೂರು-03

ಸಂಖ್ಯೆ:ಪಿಯು4/ಕಶಾಪಮೌನಿ/ದೃ.ದೋ.ಆಂ.ಮೌ.ನಿ/09/2023-24 ದಿನಾಂಕ:08.12.2023

***ಇವರಿಗೆ:-***

***ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರುಗಳು,***
***ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ)***

ವಿಷಯ:- ದೃಷ್ಟಿ ದೋಷವುಳ್ಳ ವಿದ್ಯಾರ್ಥಿಗಳಿಗೆ ಆಂತರಿಕ ಮೌಲ್ಯಮಾಪನದಿಂದ ವಿನಾಯಿತಿ ನೀಡುವ ಕುರಿತು.

ಉಲ್ಲೇಖ:- ಸರ್ಕಾರದ ಆದೇಶ ಸಂಖ್ಯೆ: ಇಪಿ. 72 ಟಿ ಪಿ ಯು 2023, ಬೆಂಗಳೂರು ದಿನಾಂಕ: 31.10.2023

*****

ಉಲ್ಲೇಖಿತ ಸರ್ಕಾರದ ಆದೇಶ ಸಂಖ್ಯೆ:ಇಪಿ. 72. ಟಿ.ಪಿ.ಯು, 2023, ಬೆಂಗಳೂರು ದಿನಾಂಕ: 31.10.2023 ರಂತೆ ದೃಷ್ಟಿ ದೋಷವುಳ್ಳ ಪ್ರಥಮ ಮತ್ತು ದ್ವಿತೀಯ ಪಿಯುಸಿ ವಿದ್ಯಾರ್ಥಿಗಳಿಗೆ ಸರ್ಕಾರದ ಆದೇಶ ಸಂಖ್ಯೆ:ಇಪಿ 46 ಟಿಪಿಯು 2023 ದಿನಾಂಕ:10.07.2023 ರಲ್ಲಿ ನಿಗಧಿಪಡಿಸಲಾಗಿರುವ ಆಂತರಿಕ ಮೌಲ್ಯಮಾಪನದಿಂದ ವಿನಾಯಿತಿ ನೀಡಿ ಇಂತಹ ವಿದ್ಯಾರ್ಥಿಗಳಿಗೆ ವಾರ್ಷಿಕ ಪರೀಕ್ಷೆಗಿಂತ ಮುನ್ನವೇ Viva voce ಮೂಲಕ 20 ಅಂಕಗಳನ್ನು ನೀಡಲು ಆದೇಶಿಸಿರುತ್ತದೆ.

ಸರ್ಕಾರದ ಆದೇಶದ ಪ್ರತಿಯನ್ನು ಯಥಾವತ್ತಾಗಿ ನಿಮಗೆ ಕಳುಹಿಸುತ್ತಾ, ತಮ್ಮ ಜಿಲ್ಲಾ ವ್ಯಾಪ್ತಿಯ ಎಲ್ಲಾ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರಿಗೆ ರವಾನಿಸಿ ಅದರಂತೆ ಕ್ರಮ ಕೈಗೊಳ್ಳಲು ತಿಳಿಸಿದೆ.

Manjushree

ಅಧ್ಯಕ್ಷರು,
ಶಾಲಾ ಶಿಕ್ಷಣ ಮತ್ತು ಮೌಲ್ಯ
ನಿರ್ಣಯ ಮಂಡಲಿ.

ಪ್ರತಿಯನ್ನು:-

1. ನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ, (ಪದವಿ ಪೂರ್ವ) 18ನೇ ಅಡ್ಡ ರಸ್ತೆ, ಮಲ್ಲೇ ಶ್ವರಂ, ಬೆಂಗಳೂರು-12 ರವರಿಗೆ ವಂದನಾಪೂರ್ವಕವಾಗಿ .
2. ನಿರ್ದೇಶಕರು, (ಪಿಯು ಪರೀಕ್ಷೆ) 6ನೇ ಅಡ್ಡ ರಸ್ತೆ, ಮಲ್ಲೇ ಶ್ವರಂ, ಬೆಂಗಳೂರು-3 ರವರಿಗೆ.
3. ಉಪನಿರ್ದೇಶಕರು (ಪಿಯು ಪರೀಕ್ಷೆ) 6ನೇ ಅಡ್ಡ ರಸ್ತೆ, ಮಲ್ಲೇ ಶ್ವರಂ, ಬೆಂಗಳೂರು-3 ರವರಿಗೆ.
4. ಕಛೇರಿ ಪ್ರತಿ.

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ದೃಷ್ಟಿ ದೋಷವುಳ್ಳ ವಿದ್ಯಾರ್ಥಿಗಳಿಗೆ ಆಂತರಿಕ ಮೌಲ್ಯಮಾಪನದಿಂದ ವಿನಾಯಿತಿ ನೀಡುವ ಬಗ್ಗೆ.

**ಓದಲಾಗಿದೆ:-** 1. ಸರ್ಕಾರದ ಆದೇಶ ಸಂಖ್ಯೆ:ಇಪಿ 46 ಟಿಪಿಯು 2023 ದಿನಾಂಕ:10-07-2023.

2. ನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ(ಪದವಿ ಪೂರ್ವ)ರವರ ಪತ್ರ ಸಂಖ್ಯೆ: DPUE-ACA0OTH/84/2023-ACADEMIC-EPARTMENT OF PRE UNIVERSITY EDUCATION ದಿನಾಂಕ:20-09-2023.

* * *

**ಪ್ರಸ್ತಾವನೆ:**

ಮೇಲೆ(1)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ 2023-24ನೇ ಶೈಕ್ಷಣಿಕ ಸಾಲಿನಿಂದ ಪ್ರಥಮ ಹಾಗೂ ದ್ವಿತೀಯ ಪಿಯುಸಿ ತರಗತಿಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಪ್ರಾಯೋಗಿಕ ಪರೀಕ್ಷೆ ಹೊಂದಿರದ ವಿಷಯಗಳಲ್ಲಿ 20 ಆಂತರಿಕ ಅಂಕಗಳನ್ನು ಪರೀಕ್ಷೆಗೆ ನಿಗದಿಪಡಿಸಿ ಆದೇಶಿಸಲಾಗಿದೆ. ಸದರಿ ಆದೇಶದನ್ವಯ ಈಗಾಗಲೇ ಕ್ರಮ ಕೈಗೊಳ್ಳಲಾಗುತ್ತಿದ್ದು, ಸದರಿ 20 ಅಂಕಗಳಲ್ಲಿ 10 ಅಂಕಗಳನ್ನು ಒಂದನೇ ಕಿರು ಪರೀಕ್ಷೆ, ಎರಡನೇ ಕಿರು ಪರೀಕ್ಷೆ ಹಾಗೂ ಮಧ್ಯವಾರ್ಷಿಕ ಪರೀಕ್ಷೆಗಳಲ್ಲಿ ಗಳಿಸಿದ ಅಂಕಗಳಲ್ಲಿ ಉತ್ತಮವಾದ ಎರಡನ್ನು 10 ಅಂಕಗಳಿಗೆ ಪರಿವರ್ತಿಸಿ ಸರಾಸರಿ ಅಂಕಗಳನ್ನು ತೆಗೆದುಕೊಳ್ಳುವುದು ಹಾಗೂ 10 ಅಂಕವನ್ನು ಪ್ರಾಜೆಕ್ಟ್ ಹಾಗೂ ಅಸೈನ್‌ಮೆಂಟ್ ವರ್ಕ್‌ಗಳಿಗಾಗಿ ನಿಗದಿಪಡಿಸಲಾಗಿತ್ತು.

ಆದರೆ, ದೃಷ್ಟಿ ದೋಷವುಳ್ಳ ವಿದ್ಯಾರ್ಥಿಗಳಿಗೆ ಎಲ್ಲಾ ಕಿರು ಪರೀಕ್ಷೆ ಹಾಗೂ ಮಧ್ಯವಾರ್ಷಿಕ ಪರೀಕ್ಷೆಗಳಿಗೆ ಬರಹಗಾರರನ್ನು ನೇಮಿಸಿಕೊಳ್ಳುವುದು ಕಷ್ಟಸಾಧ್ಯವಾಗುವ ಹಾಗೂ ಪೂರ್ಣ ಪ್ರಮಾಣದಲ್ಲಿ ಪ್ರಾಜೆಕ್ಟ್ ಗಳಲ್ಲಿ ತೊಡಗಿಸಿಕೊಳ್ಳುವುದು ಕಷ್ಟವಾಗುವ ಹಿನ್ನೆಲೆಯಲ್ಲಿ ಇದಕ್ಕೆ ಪರ್ಯಾಯ ವಿಧಾನಗಳನ್ನು ಗುರುತಿಸುವ ಸಂಬಂಧ ನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ(ಪದವಿ ಪೂರ್ವ) ಇವರ ಹಂತದಲ್ಲಿ ದಿನಾಂಕ:29-08-2023ರಂದು ವಿಕಲಚೇತನರ ಆಯುಕ್ತಾಲಯದ ಹಿರಿಯ ಅಧಿಕಾರಿಗಳೊಂದಿಗೆ ಸಭೆ ನಡೆಸಿ, ಈ ಕುರಿತಂತೆ ಚರ್ಚಿಸಿ, ಸದರಿ ಸಭೆಯಲ್ಲಿ ಪ್ರಸಕ್ತ ವರ್ಷದಿಂದ ವಿದ್ಯಾರ್ಥಿಗಳಿಗೆ ಆಂತರಿಕ ಮೌಲ್ಯಮಾಪನ ಪದ್ಧತಿ ಅಳವಡಿಸಿಕೊಂಡಿರುವ ಕುರಿತು ದೃಷ್ಟಿ ದೋಷವುಳ್ಳ ವಿದ್ಯಾರ್ಥಿಗಳಿಗೆ ಆಂತರಿಕ ಮೌಲ್ಯಮಾಪನ ಪದ್ಧತಿಯಿಂದ ವಿನಾಯಿತಿ ನೀಡಿ ವಾರ್ಷಿಕ ಪರೀಕ್ಷೆಗೂ ಮುನ್ನವೇ 20 ಅಂಕಗಳ Viva voce ನಡೆಸಿ ಅಂಕಗಳನ್ನು ನೀಡಬಹುದಾಗಿದೆ ಎಂದು ಅಭಿಪ್ರಾಯಿಸಿರುವ ಹಿನ್ನೆಲೆಯಲ್ಲಿ ದೃಷ್ಟಿ ದೋಷವುಳ್ಳ ವಿದ್ಯಾರ್ಥಿಗಳಿಗೆ ಆಂತರಿಕ ಮೌಲ್ಯಮಾಪನ ಪದ್ಧತಿಯಿಂದ ವಿನಾಯಿತಿ ನೀಡುವ ಕುರಿತಂತೆ ಸರ್ಕಾರದ ಹಂತದಲ್ಲಿ ಸೂಕ್ತ ಆದೇಶ ಹೊರಡಿಸುವಂತೆ ಮೇಲೆ (2)ರಲ್ಲಿ ಓದಲಾದ ಪತ್ರದಲ್ಲಿ ನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ(ಪದವಿ ಪೂರ್ವ)ರವರು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ(ಪದವಿ ಪೂರ್ವ)ರವರ ಪ್ರಸ್ತಾವನೆಯನ್ನು ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಇಪಿ 72 ಟಿಪಿಯು 2023, ಬೆಂಗಳೂರು ದಿನಾಂಕ :31-10-2023**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ ದೃಷ್ಟಿ ದೋಷವುಳ್ಳ ಪ್ರಥಮ ಮತ್ತು ದ್ವಿತೀಯ ಪಿಯುಸಿ ವಿದ್ಯಾರ್ಥಿಗಳಿಗೆ ಸರ್ಕಾರದ ಆದೇಶ ಸಂಖ್ಯೆ:ಇಪಿ 46 ಟಿಪಿಯು 2023 ದಿನಾಂಕ:10-07-2023ರಲ್ಲಿ ನಿಗದಿಪಡಿಸಲಾಗಿರುವ ಆಂತರಿಕ ಮೌಲ್ಯಮಾಪನದಿಂದ ವಿನಾಯ್ತಿ ನೀಡಿ ಇಂತಹ ವಿದ್ಯಾರ್ಥಿಗಳಿಗೆ ವಾರ್ಷಿಕ ಪರೀಕ್ಷೆಗಿಂತ ಮುನ್ನವೇ Viva voce ಮೂಲಕ 20 ಅಂಕಗಳನ್ನು ನೀಡಲು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ<br>
ಮತ್ತು ಅವರ ಹೆಸರಿನಲ್ಲಿ,<br>
Padmini S.N. 31/10/23<br>
(ಪದ್ಮಿನಿ ಎಸ್.ಎನ್.)<br>
ಸರ್ಕಾರದ ಅಧೀನ ಕಾರ್ಯದರ್ಶಿ,<br>
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ,<br>
(ಪದವಿ ಪೂರ್ವ ಶಿಕ್ಷಣ).

**ಇವರಿಗೆ:-**

1. ನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ(ಪದವಿ ಪೂರ್ವ), ಮಲ್ಲೇಶ್ವರಂ, 18ನೇ ಅಡ್ಡ ರಸ್ತೆ, ಬೆಂಗಳೂರು.

2. ಅಧ್ಯಕ್ಷರು, ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿ, 6ನೇ ಅಡ್ಡ ರಸ್ತೆ, ಮಲ್ಲೇಶ್ವರಂ, ಬೆಂಗಳೂರು-3.
3. ನಿರ್ದೇಶಕರು(ಪದವಿ ಪೂರ್ವ ಪರೀಕ್ಷೆ) ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿ, ಮಲ್ಲೇಶ್ವರಂ, ಬೆಂಗಳೂರು-560 003.
4. ನಿರ್ದೇಶಕರು, ವಿಕಲ ಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆ, ವಿಶ್ವೇಶ್ವರಯ್ಯ ಮುಖ್ಯ ಗೋಪುರ, 6ನೇ ಮಹಡಿ, ಅಂಬೇಡ್ಕರ್ ವೀದಿ, ಬೆಂಗಳೂರು-(ನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ(ಪದವಿ ಪೂರ್ವ) ಇವರ ಮುಖಾಂತರ).
5. ಎಲ್ಲಾ ಜಿಲ್ಲಾ ಉಪ ನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ(ಪದವಿ ಪೂರ್ವ)-(ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ ಇವರ ಮುಖಾಂತರ).
6. ಎಲ್ಲಾ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರು-(ಶಾಲಾ ಶಿಕ್ಷಣ ಇಲಾಖೆ(ಪದವಿ ಪೂರ್ವ) ಇವರ ಮುಖಾಂತರ).
7. ಇ-ಆಡಳಿತ, ಮಾಹಿತಿ ಕೇಂದ್ರ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ(ವೆಬ್‌ಸೈಟ್‌ನಲ್ಲಿ ಪ್ರಕಟಿಸಲು).
8. ಶಾಖಾ ರಕ್ಷಾ ಕಡತ // ಹೆಚ್ಚುವರಿ ಪ್ರತಿಗಳು.